ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 100 ಪಿಜಿಸಿ 2020.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.07.2020.

## ಸು ತ್ತೋ ಲೆ

ವಿಷಯ: ಕೋವಿಡ್–19 ವೈರಸ್ ಸೋಂಕು ಹರಡುತ್ತಿರುವುದು ಮುಂದುವರೆಯುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಶಾಲೆಗಳಲ್ಲಿನ ಶಿಕ್ಷಕರು ಮತ್ತು ಭೋದಕೇತರ ಸಿಬ್ಬಂದಿಯವರು ಮನೆಯಿಂದಲೆ ಕೆಲಸ ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಶ್ರೀ ಅಮಿತ್ ಖಾರೆ, ಕಾರ್ಯದರ್ಶಿಗಳು, ಉನ್ನತ ಶಿಕ್ಷಣ, ಮಾನವ ಸಂಪನ್ಮೂಲ ಇಲಾಖೆ, ನವದೆಹಲಿ ರವರ ಪತ್ರ ಸಂಖ್ಯೆ:No. 16–6/2020–U1A ದಿನಾಂಕ:30.06.2020

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಸಹನಿಶಾಪಿ.ಆಶಾ/ಕ.ವ.ಕು.ಜಾ.ಸು/32544/ಇ.ಪಿ.2020 ಸಂಖ್ಯೆ ದಿನಾಂಕ:22.3.2020

** ** **

ಕೋವಿಡ್–19 ವೈರಸ್ ಸೋಂಕು ಹರಡುತ್ತಿರುವುದು ಮುಂದುವರೆಯುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ದಿನಾಂಕ:31.07.2020 ರವರೆಗೆ ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿಯ ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರು / ಬೋಧಕೇತರ ಸಿಬ್ಬಂದಿ ಹಾಗೂ ಇತರೇ ಸಿಬ್ಬಂದಿಗಳು ಮನೆಯಿಂದಲೇ ಕೆಲಸ ನಿರ್ವಹಿಸಲು ಉಲ್ಲೇಖ (1)ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮತ್ತು ಬೋಧಕೇತರ ಸಿಬ್ಬಂದಿಗಳ ಸುರಕ್ಷತೆಯ ಹಿತದೃಷ್ಟಿಯಿಂದ ಈ ಕೆಳಕಂಡಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.

1. ಎಸ್.ಎಸ್.ಎಲ್.ಸಿ ಪರೀಕ್ಷೆ ಮೌಲ್ಯಮಾಪನ ಕಾರ್ಯಕ್ಕೆ ನಿಯೋಜಿಸಿರುವ ಸಿಬ್ಬಂದಿಗಳು ಮತ್ತು ಕೋವಿಡ್–19 ಕರ್ತವ್ಯಕ್ಕೆ ನಿಯೋಜಿಸಿರುವ ಸಿಬ್ಬಂದಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಶಾಲೆಗಳ ಶಿಕ್ಷಕರು / ಭೋದಕೇತರ ಸಿಬ್ಬಂದಿ / ಸಂಶೋಧಕರು / ಗುತ್ತಿಗೆ / ಗೌರವ ಶಿಕ್ಷಕರು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರು ದಿನಾಂಕ:31.07.2020 ರವರೆಗೆ ಮನೆಯಿಂದಲೇ ಕೆಲಸ ನಿರ್ವಹಿಸಲು ಸೂಚಿಸಿದೆ.
2. ದಿನಾಂಕ:31.07.2020 ರವರೆಗೆ ಶಿಕ್ಷಕರು ಮತ್ತು ಎಲ್ಲಾ ಸಿಬ್ಬಂದಿ ವರ್ಗದವರಿಗೆ ಈ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವುದು.
3. ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅವರ ದೂರವಾಣಿ ಸಂಖ್ಯೆಗಳನ್ನು / ಇ–ಮೇಲ್ ವಿಳಾಸಗಳನ್ನು ಶಾಲಾ ಆಡಳಿತ ಮಂಡಳಿ / ಶಾಲಾ ಮುಖ್ಯ ಶಿಕ್ಷಕರು ಪಡೆದುಕೊಳ್ಳುವುದು.
4. ಸನಿವಾಸ ಶಾಲೆಗಳಲ್ಲಿ / ಹಾಸ್ಟೆಲ್‌ಗಳಲ್ಲಿ ಉಳಿದುಕೊಂಡಿರುವ ವಿದೇಶಿ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಉಲ್ಲೇಖ(1)ರಲ್ಲಿ ಸೂಚಿಸಿರುವ ಕ್ರಮಗಳನ್ನು ಕೈಗೊಳ್ಳುವುದು.

5. ಈ ಅವಧಿಯಲ್ಲಿ ಶಿಕ್ಷಕರು/ಬೋಧಕೇತರ ಸಿಬ್ಬಂದಿಗಳು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ, ಹಾಗೂ ಸರ್ಕಾರಕ್ಕೆ ಶಿಕ್ಷಕರ/ಬೋಧಕೇತರ ಸಿಬ್ಬಂದಿಯವರ ಸೇವೆ ಅಗತ್ಯವಿದ್ದಾಗ ಆರೋಗ್ಯ ಇಲಾಖೆಯಿಂದ ಹೊರಡಿಸಿರುವ ಎಲ್ಲಾ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.
6. ಆರೋಗ್ಯ ಸೇತು ಆಪ್ ಸೋಂಕಿತರ ಹಾಗೂ ಸೋಂಕಿನ ಸಂಭಾವ್ಯ ಅಪಾಯದ ಬಗ್ಗೆ ಸೂಚನೆ ನೀಡಲು ಸಹಾಯಕಾರಿಯಾಗಿರುವುದರಿಂದ ಎಲ್ಲಾ ಶಿಕ್ಷಕರು/ಬೋಧಕೇತರ ಸಿಬ್ಬಂದಿಗಳು ತಮ್ಮ ಮೊಬೈಲ್‌ನಲ್ಲಿ ಆರೋಗ್ಯ ಸೇತು ಆಪ್ ಅಳವಡಿಸಿಕೊಳ್ಳಲು ಸೂಚಿಸಿದೆ.
7. ಆನ್‌ಲೈನ್ ತರಬೇತಿಗಳನ್ನು ನಡೆಸಿದಲ್ಲಿ ಕಡ್ಡಾಯವಾಗಿ ಮನೆಯಿಂದಲೇ ಶಿಕ್ಷಕರು ಭಾಗವಹಿಸುವುದು.
8. ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಆನ್‌ಲೈನ್ / ದೂರಸಂಪರ್ಕ / ತಂತ್ರಜ್ಞಾನ ಆಧಾರಿತ ತರಗತಿಗಳನ್ನು ನಡೆಸುವ ಯೋಜನೆಯಿದ್ದು, ಅಂತಹ ಸಂದರ್ಭದಲ್ಲಿ ತಮಗೆ ವಹಿಸುವ ಕರ್ತವ್ಯಗಳನ್ನು ಚಾಚೂ ತಪ್ಪದೆ ಪಾಲಿಸತಕ್ಕದ್ದು.
9. ಶಾಲೆಗಳು ಪ್ರಾರಂಭವಾಗುವವರೆಗೆ ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಧಾನ್ಯಗಳು, ಪಠ್ಯ ಪುಸ್ತಕಗಳು ಹಾಗೂ ಸಮವಸ್ತ್ರ ಮುಂತಾದ ಸೌಲಭ್ಯಗಳನ್ನು ವಿತರಿಸುವ ಸಂದರ್ಭದಲ್ಲಿ ತಮಗೆ ವಹಿಸುವ ಕರ್ತವ್ಯವನ್ನು ನಿರ್ವಹಿಸತಕ್ಕದ್ದು.

ದಿನಾಂಕ:31.07.2020 ರವರೆಗೆ ಎಲ್ಲಾ ಶಿಕ್ಷಕರು ಮತ್ತು ಸಿಬ್ಬಂದಿಯವರು ಉಲ್ಲೇಖ (2)ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರು ಸುತ್ತೋಲೆಯಲ್ಲಿ ಸೂಚಿಸಿರುವಂತೆ ಮನೆಯಿಂದಲೇ ಕೆಲಸ ನಿರ್ವಹಿಸಲು ಸೂಚಿಸಿದೆ.

(ಆರ್. ಸೋಮಶೇಖರ್)
ಸರ್ಕಾರದ ಜಂಟಿ ಕಾರ್ಯದರ್ಶಿ (ಸೇವೆಗಳು)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ- ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳಿಗೆ-ಅಗತ್ಯ ಕ್ರಮಕ್ಕಾಗಿ (ಉಪನಿರ್ದೇಶಕರ ಮೂಲಕ)
3. ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಶಾಲಾ ಮುಖ್ಯ ಶಿಕ್ಷಕರು/ಆಡಳಿತ ಮಂಡಳಿಯವರಿಗೆ ಅಗತ್ಯ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರ್ಗಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ